## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 779 ಗ್ರಾಪಂಅ 2014

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 22-11-2014

**ಇವರಿಂದ:**

ಸರ್ಕಾರದ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು.**

**ಇವರಿಗೆ:**

1) ರಾಜ್ಯದ ಎಲ್ಲಾ ಜಿ.ಪಂ.ನ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು
2) ಎಲ್ಲಾ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಣಾಧಿಕಾರಿಗಳು

**ಮಾನ್ಯರೆ,**

**ವಿಷಯ:** ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಒತ್ತುವರಿಗಳನ್ನು ತೆರವುಗೊಳಿಸಿರುವ ಬಗ್ಗೆ.

**ಉಲ್ಲೇಖ:**
1) ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 115 ಜಿಪಸ 2011 ದಿನಾಂಕ:04-06-2011.
2) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 650 ಗ್ರಾಪಂಅ 2014 ದಿನಾಂಕ:19-09-2014.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ಪಂಚಾಯತ್ ರಾಜ್ (ಒತ್ತುವರಿಗಳನ್ನು ತೆರವುಗೊಳಿಸುವ) ನಿಯಮಗಳು, 2011 ನ್ನು ರಚಿಸಲಾಗಿದ್ದು, ಸದರಿ ನಿಯಮಗಳನ್ವಯ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳನ್ನು ಒತ್ತುವರಿ ಮಾಡಿಕೊಂಡಿರುವುದನ್ನು ತೆರವುಗೊಳಿಸುವ ಬಗ್ಗೆ ಸವಿವರವಾಗಿ ತಿಳಿಸಲಾಗಿದೆ. ಉಲ್ಲೇಖ (2) ಸರ್ಕಾರದ ಸುತ್ತೋಲೆಯಲ್ಲಿ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿನ ಆಸ್ತಿಗಳನ್ನು ಸಂರಕ್ಷಿಸುವ ಬಗ್ಗೆ ತಿಳಿಸಲಾಗಿದೆ.

ವಿಷಯ ಸೂಚಿ: ಗ್ರಾಮ ಪಂಚಾಯತಿ ಆಸ್ತಿಗಳೆಂದರೆ ಗ್ರಾಮಠಾಣಾ, ಸಾರ್ವಜನಿಕ ರಸ್ತೆ, ಕಾಲುವೆಗಳು, ಕೆರೆಗಳು, ಆಟದ ಮೈದಾನ, ಉದ್ಯಾನವನಗಳು, ಸಾರ್ವಜನಿಕರ ಉಪಯೋಗಕ್ಕಾಗಿ ಇರಿಸಿರುವ ಪ್ರದೇಶ, ಸ್ಮಶಾನ ಅಥವಾ ರುದ್ರಭೂಮಿ, ನಿವೇಶನ, ಚರಂಡಿ, ಘಟಾರ, ಗ್ರಾಮ ಸಾರ ಚರಂಡಿ ಇತ್ಯಾದಿ.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಒತ್ತುವರಿ ಆಸ್ತಿಗಳಿಗೆ ಸಂಬಂಧಿಸಿದಂತೆ ಮಾಹಿತಿಯನ್ನು ಒದಗಿಸುವಂತೆ ಕರ್ನಾಟಕ ವಿಧಾನ ಮಂಡಲದ ಅಧೀನ ಶಾಸನ ರಚನಾ ಸಮಿತಿಯು ಬಯಸಿರುತ್ತದೆ. ಆದುದರಿಂದ ಈ ಕೆಳಕಂಡ ನಮೂನೆಯಲ್ಲಿ ಮಾಹಿತಿಯನ್ನು (ಇಮೇಲ್ ವಿಳಾಸ **sogp2011@gmail.com** ಮೂಲಕ) ಹಾರ್ಡ್ (ಹಾರ್ಡ್ ಪ್ರತಿ ಎಂದರೆ ಸಹಿ ಮಾಡಿದ ಪ್ರತಿ) ಮತ್ತು ಸಾಫ್ಟ್ (ಸಾಫ್ಟ್ ಪ್ರತಿ ಎಂದರೆ ಕಂಪ್ಯೂಟರ್‌ನಲ್ಲಿ ಬೆರಳಚ್ಚು ಮಾಡಿರುವುದು) ದಿನಾಂಕ: 30-11-2014 ರೊಳಗೆ ಸರ್ಕಾರಕ್ಕೆ ಸಲ್ಲಿಸುವಂತೆ ಕೋರಿದೆ.

ಜಿಲ್ಲೆಯ ಹೆಸರು:-

| ಗ್ರಾಮ ಪಂಚಾಯತಿಗಳ ಒಟ್ಟು ಆಸ್ತಿಗಳ ಸಂಖ್ಯೆ | ಒತ್ತುವರಿಯಾದ ಆಸ್ತಿಗಳ ಸಂಖ್ಯೆ | ಒತ್ತುವರಿಯನ್ನು ತೆರವುಗೊಳಿಸಿದ ಆಸ್ತಿಗಳ ಸಂಖ್ಯೆ | ಒತ್ತುವರಿ ತೆರವುಗೊಳಿಸಿದ ಆಸ್ತಿಯನ್ನು ಯಾವ ಉಪಯೋಗಕ್ಕಾಗಿ ಬಳಸಿಕೊಳ್ಳಲಾಗಿದೆ. |
|---|---|---|---|
| 1 | 2 | 3 | 4 |

ತಮ್ಮ ವಿಶ್ವಾಸಿ,

(ಗಂಗಾರಾಮ್ ಬಡೇರಿಯ)
ಸರ್ಕಾರದ ಕಾರ್ಯದರ್ಶಿ (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.